All India Radio: Bangalore
National Bulletin In Kannada
07.03.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

- ಭಾರತದ ಯಶಸ್ಸು ಜಗತ್ತಿನಾದ್ಯಂತ ಹೊಸ ಭರವಸೆ ಮೂಡಿಸಿದೆ – ಪ್ರಧಾನಿ ನರೇಂದ್ರ ಮೋದಿ
- 2025–26ನೇ ಸಾಲಿನ ಕರ್ನಾಟಕ ರಾಜ್ಯ ಬಜೆಟ್ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಮಂಡನೆ
- ಕರ್ನಾಟಕದ ಮೈಸೂರು ಆಕಾಶವಾಣಿಗೆ 90 ವರ್ಷ; ಇಂದು ವಿಶೇಷ ಕಾರ್ಯಕ್ರಮ ಆಯೋಜನೆ
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಯುಪಿ ವಾರಿಯರ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ 6 ವಿಕೆಟ್ ಜಯ

*****************

ಭಾರತದ ಸಾಧನೆಗಳು ಮತ್ತು ಯಶಸ್ಸುಗಳು ಜಗತ್ತಿನಾದ್ಯಂತ ಹೊಸ ಭರವಸೆಯ ಅಲೆಯನ್ನು ಹುಟ್ಟುಹಾಕಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಖಾಸಗಿ ಸುದ್ದಿ ವಾಹಿನಿಯೊಂದು ಆಯೋಜಿಸಿದ್ದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ ಇಂದು ಜಾಗತಿಕ ಬೆಳವಣಿಗೆಯ ಮುಂದಾಳತ್ವ ವಹಿಸಿದ್ದು, ಅಭಿವೃದ್ಧಿಯ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ. ಇಂದು ಇಡೀ ಜಗತ್ತು ಇದು ಭಾರತದ ಯುಗ ಎಂದು ಹೇಳುತ್ತಿದೆ ಎಂದು ಹೇಳಿದರು.

ಕಳೆದ ದಶಕದಲ್ಲಿ ಭಾರತ ವಿಶ್ವದ ಐದನೇ ಅತಿದೊಡ್ಡ ಆರ್ಥಿಕತೆಯಾಗಿ ಬೆಳೆದಿದ್ದು, ಮೂರನೇ ಅತಿದೊಡ್ಡ ಆರ್ಥಿಕತೆಯಾಗುವತ್ತ ವೇಗವಾಗಿ ಸಾಗುತ್ತಿದೆ ಎಂದು ಅವರು ಹೇಳಿದರು. ಕಳೆದ ಹತ್ತು ವರ್ಷಗಳಲ್ಲಿ ಭಾರತ ವಿಶ್ವದ ಎರಡನೇ ಅತಿದೊಡ್ಡ ಉಕ್ಕು ಉತ್ಪಾದಕ, ಎರಡನೇ ಅತಿದೊಡ್ಡ ಮೊಬೈಲ್ ಫೋನ್ ತಯಾರಕ ಮತ್ತು ಮೂರನೇ ಅತಿದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆಯಾಗಿದೆ ಸೌರಶಕ್ತಿ ಸಾಮರ್ಥ್ಯದಲ್ಲಿ ಭಾರತವು ಅಗ್ರ ಐದು ದೇಶಗಳಲ್ಲಿ ಒಂದಾಗಿದೆ ಎಂದು ಪ್ರಧಾನಿ ಹೇಳಿದರು.

ಧ್ವನಿ – ಪ್ರಧಾನಿ ನರೇಂದ್ರ ಮೋದಿ – (30 ಸೆಕೆಂಡುಗಳು)

ಬಾಹ್ಯಾಕಾಶ ವಲಯವು ಈಗ ಯುವ ನಾವೀನ್ಯಕಾರರಿಗೆ ಮುಕ್ತವಾಗಿದೆ, ಇದರ ಪರಿಣಾಮವಾಗಿ ದೇಶದಲ್ಲಿ 250 ಕ್ಕೂ ಹೆಚ್ಚು ಬಾಹ್ಯಾಕಾಶ ನವೋದ್ಯಮಗಳು ಸೃಷ್ಟಿಯಾಗಿವೆ. ಡಿಬಿಟಿ ಮೂಲಕ ಇಲ್ಲಿಯವರೆಗೆ 42 ಲಕ್ಷ ಕೋಟಿ ರೂಪಾಯಿಗಳನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ. 25 ಕೋಟಿ ಜನರನ್ನು ಬಡತನದಿಂದ ಹೊರತರಲಾಗಿದೆ ಎಂದರು.

*****************

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ಭೇಟಿಗಾಗಿ ಗುಜರಾತ್ ಹಾಗೂ ಕೇಂದ್ರಾಡಳಿತ ಪ್ರದೇಶಗಳಾದ ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್ ಹಾಗೂ ದಿಯುಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ತಮ್ಮ ಭೇಟಿಯ ವೇಳೆ ಅವರು, ಗುಜರಾತ್‌ನ ಸೂರತ್ ಮತ್ತು ನವಸಾರಿ ಮತ್ತು ದಮನ್‌ನ ಸಿಲ್ವಾಸಾದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿಯವರು ಇಂದು ಬೆಳಿಗ್ಗೆ ದಾದ್ರಾ ಮತ್ತು ನಗರ ಹವೇಲಿ ಹಾಗೂ ದಮನ್ ಹಾಗೂ ದಿಯುಗೆ ಭೇಟಿ ನೀಡಲಿದ್ದು, ಸಿಲ್ವಾಸಾ ಮತ್ತು ದಾದ್ರಾ ನಗರ ಹವೇಲಿಯಲ್ಲಿ 2 ಸಾವಿರದ 587 ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಬಳಿಕ ಅವರು ಸಿಲ್ವಾಸಾದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರಧಾನಿ ಸೂರತ್ ಆಹಾರ ಭದ್ರತಾ ಆದ್ರೀಕರಣ ಅಭಿಯಾನವನ್ನು ಉದ್ಘಾಟಿಸಲಿದ್ದಾರೆ. ಸೂರತ್‌ನಲ್ಲಿ ಸುಮಾರು 2 ಲಕ್ಷ ಫಲಾನುಭವಿಗಳು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯ ಪ್ರಯೋಜನಗಳನ್ನು ಪಡೆಯಲಿದ್ದಾರೆ.

ನಾಳೆಯ ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಪ್ರಧಾನಿ ನವಸಾರಿಯಲ್ಲಿ 'ಲಖ್ಪತಿ ದೀದಿ ಸಮ್ಮೇಳನ'ದಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಮಂತ್ರಿಯವರು 25 ಸಾವಿರಕ್ಕೂ ಹೆಚ್ಚು ಸ್ವಸಹಾಯ ಗುಂಪುಗಳ 2.5 ಲಕ್ಷ ಮಹಿಳೆಯರಿಗೆ 450 ಕೋಟಿ ರೂಪಾಯಿಗಳಿಗೂ ಹೆಚ್ಚಿನ ಆರ್ಥಿಕ ನೆರವನ್ನು ವಿತರಿಸಲಿದ್ದಾರೆ.

*****************

ಕೋವಿಡ್–19 ಸಾಂಕ್ರಾಮಿಕ ರೋಗದ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯತಂತ್ರದ ನಾಯಕತ್ವ ಮತ್ತು ಅಮೂಲ್ಯವಾದ ಸಹಾಯವನ್ನು ಗುರುತಿಸಿ ಅವರಿಗೆ ಪ್ರತಿಷ್ಠಿತ ಗೌರವ ಆರ್ಡರ್ ಆಫ್ ಫ್ರೀಡಮ್ ಆಫ್ ಬಾರ್ಬಡೋಸ್ ಪ್ರಶಸ್ತಿಯನ್ನು ನೀಡಲಾಗಿದೆ.

ಬಾರ್ಬಡೋಸ್‌ನ ಬ್ರಿಡ್ಜ್‌ಟೌನ್‌ನಲ್ಲಿ ನಡೆದ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಪರವಾಗಿ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಪಬಿತ್ರಾ ಮಾರ್ಗರಿಟಾ ಅವರು ಈ ಪ್ರಶಸ್ತಿಯನ್ನು ಸ್ವೀಕರಿಸಿದರು.

ಕಳೆದ ವರ್ಷ ನವೆಂಬರ್ 20 ರಂದು ಗಯಾನಾದ ಜಾರ್ಜ್‌ಟೌನ್‌ನಲ್ಲಿ ನಡೆದ 2 ನೇ ಭಾರತ–ಕ್ಯಾರಿಕೊಮ್ ನಾಯಕರ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ಅವರೊಂದಿಗಿನ ಸಭೆಯಲ್ಲಿ ಬಾರ್ಬಡೋಸ್ ಪ್ರಧಾನಿ ಮಿಯಾ ಅಮೋರ್ ಮೊಟ್ಲಿ ಅವರು ಈ ಪ್ರಶಸ್ತಿ ಕುರಿತು ಘೋಷಣೆ ಮಾಡಿದ್ದರು.

*****************

ಇಂದು ದೇಶಾದ್ಯಂತ ಜನೌಷಧಿ ದಿನವನ್ನು ಆಚರಿಸಲಾಗುತ್ತಿದೆ. ಪ್ರಧಾನಮಂತ್ರಿ ಜನೌಷಧಿ ಯೋಜನೆಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಜೆನೆರಿಕ್ ಔಷಧಿಗಳ ಬಳಕೆಯನ್ನು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ.

ಗುಣಮಟ್ಟದ ಜೆನೆರಿಕ್ ಔಷಧಿಗಳನ್ನು ಎಲ್ಲರಿಗೂ ಕೈಗೆಟುಕುವ ಬೆಲೆಯಲ್ಲಿ ಲಭ್ಯವಾಗುವಂತೆ ಮಾಡುವ ಉದ್ದೇಶದಿಂದ, ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಪರಿಯೋಜನೆ ಗುಣಮಟ್ಟದ ಔಷಧಿಗಳನ್ನು ಕೈಗೆಟುಕುವ ಬೆಲೆಯಲ್ಲಿ ಲಭ್ಯವಾಗುವಂತೆ ಮಾಡುವ ಗುರಿಯನ್ನು ಹೊಂದಿದೆ. ಈ ಉಪಕ್ರಮವನ್ನು ಬೆಂಬಲಿಸಲು ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ ಈ ವಾರವಿಡೀ ದೇಶಾದ್ಯಂತ ಚಟುವಟಿಕೆಗಳನ್ನು ಆಯೋಜಿಸಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಪರಿಯೋಜನೆಯನ್ನು ನವೆಂಬರ್ 2008 ರಲ್ಲಿ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳು ಎಂಬ ಮೀಸಲಾದ ಮಳಿಗೆಗಳ ಮೂಲಕ ಸಾರ್ವಜನಿಕರಿಗೆ ಕೈಗೆಟುಕುವ ಬೆಲೆಯಲ್ಲಿ ಗುಣಮಟ್ಟದ ಔಷಧಿಗಳನ್ನು ಒದಗಿಸಲು ಪ್ರಾರಂಭಿಸಲಾಯಿತು.

ಈ ಯೋಜನೆಯು ಮಾರುಕಟ್ಟೆಗಿಂತ 50 ರಿಂದ 80 ಪ್ರತಿಶತ ಕಡಿಮೆ ಬೆಲೆಯಲ್ಲಿ ಔಷಧಿಗಳನ್ನು ಒದಗಿಸುತ್ತದೆ. ದೇಶದ ಎಲ್ಲಾ ಜಿಲ್ಲೆಗಳಲ್ಲಿ 15 ಸಾವಿರಕ್ಕೂ ಹೆಚ್ಚು ಜನೌಷಧಿ ಕೇಂದ್ರಗಳು ಈಗ ಕಾರ್ಯನಿರ್ವಹಿಸುತ್ತಿವೆ.

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು 2025–26ನೇ ಸಾಲಿನ ಕರ್ನಾಟಕ ರಾಜ್ಯ ಬಜೆಟ್ ಮಂಡಿಸಲಿದ್ದಾರೆ. ಇದು ಅವರು ಮಂಡಿಸುತ್ತಿರುವ ದಾಖಲೆಯ 16ನೇ ಆಯವ್ಯಯವಾಗಿದೆ.

ಇಂದು ಬೆಳಗ್ಗೆ 10 ಗಂಟೆ 15ನಿಮಿಷಕ್ಕೆ ಅವರು ಬಜೆಟ್ ಮಂಡಿಸಲಿದ್ದು, ರಾಜ್ಯದ ಹಣಕಾಸು ಸಚಿವರಾಗಿ ಅತಿಹೆಚ್ಚು ಬಜೆಟ್ ಮಂಡಿಸಿದ ಕೀರ್ತಿಗೆ ಭಾಜನರಾಗಲಿದ್ದಾರೆ.

ಈ ಬಾರಿಯ ಬಜೆಟ್‌ನಲ್ಲಿ ಕೃಷಿ, ಆರೋಗ್ಯ, ಶಿಕ್ಷಣಕ್ಕೆ ಒತ್ತು ನೀಡಲಾಗುವುದು, ಪಕ್ಷಾತೀತವಾಗಿ ಸಮಾಜದ ಎಲ್ಲಾ ಜಾತಿ, ಜನಾಂಗ, ವರ್ಗದ ಜನರ ಆಶೋತ್ತರಗಳನ್ನು ಆಲಿಸಿ, ಅವುಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಪ್ರಯತ್ನವನ್ನು ಈ ಬಜೆಟ್ ಮೂಲಕ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

*****************

ಕರ್ನಾಟಕದ ಮೈಸೂರು ಆಕಾಶವಾಣಿ ಕೇಂದ್ರವು ಇಂದು ತನ್ನ 90 ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ.

ಆಗ ರಾಜಪ್ರಭುತ್ವದ ರಾಜ್ಯವಾಗಿದ್ದ ಮೈಸೂರು ತನ್ನ ಮೊದಲ ಆಕಾಶವಾಣಿ ಕೇಂದ್ರವನ್ನು ಪಡೆದುಕೊಂಡಿದ್ದು 1935 ರಲ್ಲಿ. ಅಂದಿನಿಂದ ಆಕಾಶವಾಣಿ ಕೇಂದ್ರವು ಕೆಲವು ಪ್ರಮುಖ ಸಾಹಿತ್ಯ ವ್ಯಕ್ತಿಗಳು ಮತ್ತು ಹೆಸರಾಂತ ಸಂಗೀತಗಾರರಿಗೆ ಅವಕಾಶವನ್ನು ಒದಗಿಸಿದೆ.

ಆಕಾಶವಾಣಿ ಮತ್ತು ಸುದ್ದಿ ಸೇವೆಗಳ ವಿಭಾಗದ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಲಿವಾಲ್ ಗೌರ್ ಇಂದು ಮೈಸೂರಿನ ರೇಡಿಯೋ ಕೇಂದ್ರದಲ್ಲಿ 'ನುಡಿ ನಾಡ ಸಂಗಮ' ಎಂಬ ಸಾಂಸ್ಕೃತಿಕ ಉತ್ಸವವನ್ನು ಉದ್ಘಾಟಿಸಲಿದ್ದಾರೆ. ಸುತ್ತೂರು ಶ್ರೀಕ್ಷೇತ್ರ

ಮಠದ ಪೀಠಾಧಿಪತಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಜಿ, ಮೈಸೂರು ರಾಜಮನೆತನದ ಪ್ರಮೋದಾದೇವಿ ಒಡೆಯರ್ ಮತ್ತು ಹಿರಿಯ ವಿದ್ವಾಂಸ ಡಾ. ಟಿ.ವಿ. ವೆಂಕಟಾಚಲ ಶಾಸ್ತ್ರಿ ಈ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಸೈಕಲ್ ರ‍್ಯಾಲಿ, ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಜಾನಪದ ತಂಡಗಳಿಂದ ಪ್ರದರ್ಶನಗಳು, ಶಾಸ್ತ್ರೀಯ ಮತ್ತು ಲಘು ಸಂಗೀತ ಆಯೋಜಿಸಲಾಗಿದೆ.

ಈ ಸಂದರ್ಭದಲ್ಲಿ ಗಣ್ಯ ವ್ಯಕ್ತಿಗಳನ್ನು ಸನ್ಮಾನಿಸಲಾಗುವುದು. 1935 ರಲ್ಲಿ ಮೈಸೂರು ಆಕಾಶವಾಣಿ ಕೇಂದ್ರವನ್ನು ವೈಯಕ್ತಿಕವಾಗಿ ಸ್ಥಾಪಿಸಿದ ಎಂವಿಜಿ ಎಂದೇ ಖ್ಯಾತರಾದ ದಿವಂಗತ ಎಂ ವಿ ಗೋಪಾಲಸ್ವಾಮಿ ಮತ್ತು ಮೊದಲ ಸಹಾಯಕ ನಿರ್ದೇಶಕಿ ದಿವಂಗತ ನಾ ಕಸ್ತೂರಿ ಅವರ ಕುಟುಂಬ ಸದಸ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ.

*****************

ಬೆಂಗಳೂರಿನ ಮಾರತ್‌ಹಳ್ಳಿಯಲ್ಲಿ ಶ್ರೀಕೃಷ್ಣ ಸೇವಾಶ್ರಮ ಟ್ರಸ್ಟ್ ವತಿಯಿಂದ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ವಿಶ್ವೇಶತೀರ್ಥ ಸ್ಮಾರಕ ಆಸ್ಪತ್ರೆಯನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ಉದ್ಘಾಟಿಸಿದ್ದಾರೆ.

ಪೇಜಾವರ ಮಠದ ಪೀಠಾಧಿಪತಿಗಳಾದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಆಶೀರ್ವಚನ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಮಾಜಿ ಸಚಿವ ಅರವಿಂದ ಲಿಂಬಾವಳಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಾಲ್ಗೊಳ್ಳಲಿದ್ದಾರೆ.

*****************

ಸಾಹಿತ್ಯ ಅಕಾಡೆಮಿಯು ತನ್ನ ವಾರ್ಷಿಕ ಪತ್ರಗಳ ಉತ್ಸವ, ಏಷ್ಯಾದ ಅತಿದೊಡ್ಡ ಸಾಹಿತ್ಯ ಉತ್ಸವ – ಸಾಹಿತ್ಯೋತ್ಸವವನ್ನು ಇಂದಿನಿಂದ ಮಾರ್ಚ್ 12 ರವರೆಗೆ ಆಯೋಜಿಸಲಿದೆ. ನವದೆಹಲಿಯ ರವೀಂದ್ರ ಭವನದಲ್ಲಿ ಇಂದು ಈ ಆರು ದಿನಗಳ ಕಾರ್ಯಕ್ರಮಕ್ಕೆ ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಚಾಲನೆ ನೀಡಲಿದ್ದಾರೆ.

*****************

ಹೈದರಾಬಾದ್‌ನ ಜಿಎಂಸಿ ಬಾಲಯೋಗಿ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಪಂಜಾಬ್ ಎಫ್‌ಸಿ – ಹೈದರಾಬಾದ್ ಎಫ್‌ಸಿಯನ್ನು 3–1 ಅಂತರದಿಂದ ಸೋಲಿಸಿದೆ.

ಕೊಚ್ಚಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು, ಕೇರಳ ಬ್ಲಾಸ್ಟರ್ಸ್ ಎಫ್‌ಸಿ ತಂಡ– ಮುಂಬೈ ಸಿಟಿ ಎಫ್‌ಸಿಯನ್ನು ಎದುರಿಸಲಿದೆ. ಪಂದ್ಯ ಸಂಜೆ 07:30 ಕ್ಕೆ ಪ್ರಾರಂಭವಾಗಲಿದೆ.

*****************

ಲಖನೌನ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್– ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಯುಪಿ ವಾರಿಯರ್ಸ್ ತಂಡವನ್ನು 6 ವಿಕೆಟ್‌ಗಳಿಂದ ಮಣಿಸಿದೆ.

ಇಂದು ಲಖನೌದಲ್ಲಿ ನಡೆಯಲಿರುವ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ 7.30ಕ್ಕೆ ಆರಂಭವಾಗಲಿದೆ.

*********ಮುಕ್ತಾಯ********